# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 1178 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು: | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸ ಬೇಕಾದ ದಿನಾಂಕ : | 15.12.2023 |
| ಉತ್ತರಿಸುವವರು: | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಹಿರಿಯ ನಾಗರಿಕರಿಗೆ ಸರ್ಕಾರದಿಂದ ದೊರೆಯುತ್ತಿರುವ ನೆರವು, ಸಹಾಯ ಮತ್ತು ಸೌಲಭ್ಯಗಳು ಯಾವುವು; | ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವತಿಯಿಂದ ಹಿರಿಯ ನಾಗರಿಕರಿಗೆ ಒದಗಿಸುತ್ತಿರುವ ನೆರವು, ಸಹಾಯ ಮತ್ತು ಸೌಲಭ್ಯಗಳ ವಿವರಗಳನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ. |
| ಆ | ರಾಜ್ಯದಲ್ಲಿ ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮ ಹಾಗೂ ಯೋಜನೆಗಳೇನು; | ಇಲಾಖೆಯ ವತಿಯಿಂದ ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಸರ್ಕಾರವು ರೂಪಿಸಿರುವ ಕಾರ್ಯಕ್ರಮ ಹಾಗೂ ಯೋಜನೆಗಳ ವಿವರಗಳನ್ನು ಅನುಬಂಧ-2 ರಲ್ಲಿ ಒದಗಿಸಲಾಗಿದೆ. |
| ಇ | ಹಿರಿಯ ನಾಗರಿಕರಿಗೆ ಪ್ರಸ್ತುತ ನೀಡುತ್ತಿರುವ ರೂ.1200/-ಗಳ ಮಾಸಾಶನವನ್ನು ಇಂದಿನ ಅವರ ಅವಶ್ಯಕತೆಗಳ ವೆಚ್ಚವನ್ನು ಗಮನದಲ್ಲಿಟ್ಟುಕೊಂಡು ಅದಕ್ಕೆ ಪೂರಕವಾಗಿ ಸಾಕಷ್ಟು ಹೆಚ್ಚು ಮಾಡಲು ಸರ್ಕಾರ ಈ ಕೂಡಲೇ ಕ್ರಮ ವಹಿಸುವುದೇ; | ದಿನಾಂಕ:01.10.2023ರಂದು ನಡೆದ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಹಿರಿಯ ನಾಗರಿಕರಿಗೆ ಪ್ರಸ್ತುತ ನೀಡುತ್ತಿರುವ ಮಾಸಾಶನವನ್ನು ಇಂದಿನ ಅವರ ಅವಶ್ಯಕತೆ ಹಾಗೂ ವಯೋ ಸಹಜ ಕಾಯಿಲೆಗಳ ಔಷದೋಪಚಾರಗಳಿಗೆ ಅನುಗುಣವಾಗಿ ಮುಂದಿನ ಆಯವ್ಯಯ ಭಾಷಣದಲ್ಲಿ ಹೆಚ್ಚಳ ಮಾಡಲಾಗುವುದೆಂದು ಭರವಸೆ ನೀಡಿರುತ್ತಾರೆ. |
| ಈ | ಮಾನಸಿಕ ಆರೋಗ್ಯ ಸಮಸ್ಯೆ, ಮರೆವು, ಖಿನ್ನತೆ, ಹಠಮಾರಿತನ, ಅನಾರೋಗ್ಯ ಸಮಸ್ಯೆ ಎದುರಿಸುತ್ತಿರುವ ಹಿರಿಯ ನಾಗರಿಕರನ್ನು ನೋಡಿಕೊಳ್ಳುವ ಬಗ್ಗೆ, ಇರುವ ಹಾಗೂ ಸಾಕಷ್ಟು ಸಹಕಾರಿಯಾಗಿರುವ "ವಯೋ ಮಾಸನ ಸಂಜೀವಿನಿ" ಆನ್‌ಲೈನ್ ಕಾರ್ಯಕ್ರಮದ ಬಗ್ಗೆ ಹೆಚ್ಚಿನ ಮಾಹಿತಿ ಹಾಗೂ ಅರಿವು ಮೂಡಿಸಲು ಇಲಾಖೆ ಏನು ಕ್ರಮಗಳನ್ನು ವಹಿಸಿದೆ? | ಹಿರಿಯ ನಾಗರಿಕರ ಸಮಸ್ಯೆಗಳಿಗೆ ಸ್ಪಂದಿಸಲು, ಯೋಜನೆಗಳ ಹಾಗೂ ಕಾಯ್ದೆಗಳ ಪ್ರಚಾರ,, ಆಧುನಿಕ ತಂತ್ರಜ್ಞಾನ ಬಳಸಿ ತಂತ್ರಾಂಶ ಅಳವಡಿಸಿ, ಯೋಜನೆಗಳ ಸಮರ್ಪಕ ಮೇಲ್ವಿಚಾರಣೆ, ಹಿರಿಯ ನಾಗರಿಕರ ಸಮಸ್ಯೆಗಳಿಗೆ ಭಾಗಿದಾರ ಇಲಾಖೆಗಳ ಸಹಯೋಗದೊಂದಿಗೆ ಏಕಗವಾಕ್ಷಿಯಲ್ಲಿ ಪರಿಹಾರ ಮತ್ತು ಹಿರಿಯರ ಮಾನಸಿಕ, ದೈಹಿಕ, ಭಾವನಾತ್ಮಕ ಅವಶ್ಯಕತೆಗಳ ಬಗ್ಗೆ, ಸಂಶೋಧನೆ ಕೈಗೊಂಡು ಹೊಸ ಯೋಜನೆಗಳನ್ನು ರೂಪಿಸಲು ಅನುವಾಗುವಂತೆ ಹಿರಿಯ ನಾಗರಿಕರ "ರಾಜ್ಯ ಸಂಪನ್ಮೂಲ ಕೋಶ"ವನ್ನು ರಾಜ್ಯ ಸರ್ಕಾರ ಮತ್ತು ನಿಮ್ಹಾನ್ಸ್ ಸಂಸ್ಥೆಯ ಸಹಯೋಗದಲ್ಲಿ 2016ರಲ್ಲಿ ಪ್ರಾರಂಭಿಸಲಾಗಿದೆ. ಇದರ ಭಾಗವಾಗಿ "ವಯೋ ಮಾಸನ ಸಂಜೀವಿನಿ" ಆನ್‌ಲೈನ್ ಕಾರ್ಯಕ್ರಮವು ರೂಪುಗೊಂಡಿದೆ. ಈ ಕಾರ್ಯಕ್ರಮದ ಕುರಿತು ಇನ್ನು ಹೆಚ್ಚಿನ ಪ್ರಚಾರ ಮಾಡಲು ಕ್ರಮಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ: ಮಮಇ 231 ಪಿಹೆಚ್‌ಪಿ 2023**

(ಲಕ್ಷ್ಮಿ ಆರ್. ಹೆಬ್ಬಾಳಕರ್)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ ಸಚಿವರು.

## ಅನುಬಂಧ-1

## ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವತಿಯಿಂದ ಹಿರಿಯ ನಾಗರಿಕರಿಗೆ ಒದಗಿಸುತ್ತಿರುವ ನೆರವು, ಸಹಾಯ ಮತ್ತು ಸೌಲಭ್ಯಗಳ ವಿವರ

1. ಹಿರಿಯ ನಾಗರಿಕರ ಸಮಸ್ಯೆಗಳ ನಿವಾರಣೆಗಾಗಿ ಹಾಗೂ ತುರ್ತು ಸಹಾಯಕ್ಕಾಗಿ ಪ್ರಸ್ತುತ ರಾಜ್ಯದ 26 ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

2. ತಂದೆ ತಾಯಿಯರ ಮತ್ತು ಹಿರಿಯ ನಾಗರಿಕರ ಪಾಲನೆ, ಪೋಷಣೆ ಹಾಗೂ ಕಲ್ಯಾಣ ಅಧಿನಿಯಮ 2007ರಡಿ ರಾಜ್ಯದಲ್ಲಿ ಹಿರಿಯ ನಾಗರಿಕರ ಪಾಲನೆ, ಪೋಷಣೆ, ರಕ್ಷಣೆಗಾಗಿ ಮತ್ತು ದೌರ್ಜನ್ಯ, ಶೋಷಣೆ, ಮೋಸ ವಂಚನೆಗೆ ಒಳಪಟ್ಟ ಹಿರಿಯ ನಾಗರಿಕರು ಕಾಯ್ದೆಯಡಿ ರಚಿತವಾಗಿರುವ ಆಯಾ ಉಪವಿಭಾಗದ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ನಿರ್ವಹಣಾ ನ್ಯಾಯ ಮಂಡಳಿಯಲ್ಲಿ ಪ್ರಕರಣ ದಾಖಲಿಸಿ ನ್ಯಾಯ ಪಡೆಯಲು ಸೌಲಭ್ಯವನ್ನು ಕಲ್ಪಿಸಲಾಗಿದೆ.

3. ಹಿರಿಯ ನಾಗರಿಕರಲ್ಲಿ ಅಡಗಿರುವ ಸಂಪನ್ಮೂಲ ಶಕ್ತಿಯನ್ನು ಉಪಯೋಗಿಸಿಕೊಳ್ಳಲು ಹಾಗೂ ಹಿರಿಯ ನಾಗರಿಕರಿಗೆ ಹಗಲು ವೇಳೆಯಲ್ಲಿ ಅವಶ್ಯವಿರುವ ಆರೋಗ್ಯ ಚಿಕಿತ್ಸೆ ಒದಗಿಸಲು ಮತ್ತು ಕೇಂದ್ರಗಳಲ್ಲಿ, ಟಿ.ವಿ ಕಾರ್ಯಕ್ರಮ, ಯೋಗ, ಆರೋಗ್ಯ ಸ್ನೇಹಿ ಚಟುವಟಿಕೆಗಳ ಮೂಲಕ ಮನೋರಂಜನೆ ಒದಗಿಸಲು ಪ್ರಸ್ತುತ ರಾಜ್ಯದ 24 ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 25 ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಕಾರ್ಯನಿರ್ವಹಿಸುತ್ತಿವೆ.

4. ಇಲಾಖೆಯ ವತಿಯಿಂದ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ರಾಜ್ಯ ಮತ್ತು ಕೇಂದ್ರ ಅನುದಾನದಡಿ ನಿರ್ಗತಿಕ ಹಿರಿಯ ನಾಗರಿಕರಿಗಾಗಿ ವೃದ್ಧಾಶ್ರಮಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ವೃದ್ಧಾಶ್ರಮಗಳಲ್ಲಿ ಹಿರಿಯ ನಾಗರಿಕರಿಗೆ ಉಚಿತ ಊಟ, ವಸತಿ ಮತ್ತು ಆರೋಗ್ಯ ಸೌಲಭ್ಯಗಳನ್ನು ಕಲ್ಪಿಸಲಾಗಿರುತ್ತದೆ.

5. ಹಿರಿಯ ನಾಗರಿಕರ ಗುರುತಿನ ಚೀಟಿ ಹೊಂದಿರುವವರಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವೋಲ್ವೋ ಬಸ್ ಹೊರತುಪಡಿಸಿ ಎಲ್ಲಾ ಬಸ್‌ಗಳ ಪ್ರಯಾಣ ದರದಲ್ಲಿ ಶೇ.25ರಷ್ಟು ರಿಯಾಯಿತಿ ಸೌಲಭ್ಯವನ್ನು ನೀಡಲಾಗುತ್ತಿದೆ.

<u>ಅನುಬಂಧ-2</u>

## ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮ ಹಾಗೂ ಯೋಜನೆಗಳ ವಿವರ

### 1. <u>ಹಗಲು ಯೋಗಕ್ಷೇಮ ಕೇಂದ್ರಗಳು:</u>

ರಾಜ್ಯದ 30 ಜಿಲ್ಲೆಗಳಿಗೆ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದ ಮಂಜೂರಾತಿ ದೊರೆತಿದ್ದು, ಪ್ರತಿ ಕೇಂದ್ರದಲ್ಲಿ 50 ಫಲಾನುಭವಿಗಳಿಗೆ ಅವಕಾಶ ಕಲ್ಪಿಸಿಕೊಡಲಾಗಿದ್ದು, ಸದರಿ ಯೋಜನೆಗೆ ಸರ್ಕಾರದಿಂದ ವಾರ್ಷಿಕ ರೂ.11.20 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗುತ್ತದೆ. ಪ್ರಸ್ತುತ 25 ಜಿಲ್ಲೆಗಳಲ್ಲಿ (ಬೆಂಗಳೂರು ನಗರ ಜಿಲ್ಲೆ 02 ಸೇರಿದಂತೆ) 26 ಹಗಲು ಯೋಗಕ್ಷೇಮ ಕೇಂದ್ರಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ. ಈ ಕೇಂದ್ರಗಳಲ್ಲಿ ಹಿರಿಯ ನಾಗರಿಕರಿಗೆ ಆರೋಗ್ಯ ಮತ್ತು ವೈದ್ಯಕೀಯ ಸೌಲಭ್ಯಗಳನ್ನು ಕಲ್ಪಿಸುವುದು, ಹಿರಿಯರಲ್ಲಿ ಅಡಗಿರುವ ಸಂಪನ್ಮೂಲ ಶಕ್ತಿಯನ್ನು ಉಪಯೋಗಿಸಿಕೊಂಡು ದೇಶದ ಅಭಿವೃದ್ಧಿಗೆ ಶ್ರಮಿಸುವುದು ಆದ್ಯ ಕರ್ತವ್ಯವಾಗಿರುತ್ತದೆ.

### 2. <u>ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು:</u>

ಹಿರಿಯ ನಾಗರಿಕರು ಕಿರುಕುಳ, ಹಣಕಾಸಿನ ಶೋಷಣೆ, ಮಾನಸಿಕ ತುಮುಲ ಮತ್ತು ದುರ್ಬಲರಾಗಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇಂತಹ ಸಮಸ್ಯೆಗಳ ನಿವಾರಣೆಗಾಗಿ ಹಾಗೂ ತುರ್ತು ಸಹಾಯಕ್ಕಾಗಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ರಾಜ್ಯದ 30 ಜಿಲ್ಲೆಗಳಲ್ಲಿ ನಡೆಸಲು ಆಡಳಿತಾತ್ಮಕ ಮಂಜೂರಾತಿ ದೊರೆತಿರುತ್ತದೆ. ಬೆಳಗಾವಿ, ಕಲಬುರಗಿ, ಉತ್ತರ ಕನ್ನಡ ಮತ್ತು ಹಾವೇರಿ ಜಿಲ್ಲೆಗಳನ್ನು ಹೊರತುಪಡಿಸಿ, ಉಳಿದಂತೆ 26 ಜಿಲ್ಲೆಗಳಲ್ಲಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ, ಸ್ವಯಂಸೇವಾ ಸಂಸ್ಥೆಗಳ ಸಹಯೋಗದಿಂದ ನಡೆಸಲಾಗುತ್ತಿದೆ. ಸದರಿ ಯೋಜನೆಗೆ ಸರ್ಕಾರದಿಂದ ವಾರ್ಷಿಕ ರೂ.7.15 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗುತ್ತದೆ.

### 3. <u>ಹಿರಿಯ ನಾಗರಿಕರ ವೃದ್ಧಾಶ್ರಮಗಳು:</u>

ರಾಜ್ಯದ 30 ಜಿಲ್ಲೆಗಳಲ್ಲಿ ನಿರ್ಗತಿಕ ಹಿರಿಯ ನಾಗರಿಕರಿಗಾಗಿ ವೃದ್ಧಾಶ್ರಮಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದ್ದು, ಈ ವೃದ್ಧಾಶ್ರಮದಲ್ಲಿ 25 ನಿರ್ಗತಿಕ ಹಿರಿಯ ನಾಗರಿಕರನ್ನು ದಾಖಲಿಸಿಕೊಳ್ಳಲು ಅವಕಾಶವಿದ್ದು, ಒಂದು ವೃದ್ಧಾಶ್ರಮದ ನಿರ್ವಹಣೆಗಾಗಿ ವಾರ್ಷಿಕ ರೂ.12.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ. ಇದರಲ್ಲಿ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳಿಗಾಗಿ ಒಟ್ಟು ಯೋಜನಾ ವೆಚ್ಚದ ಶೇ.90ರಷ್ಟು ಅನುದಾನವನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಲಾಗುತ್ತಿದ್ದು, ಉಳಿದ ಶೇ.10ರಷ್ಟನ್ನು ಸಂಸ್ಥೆಯು ಭರಿಸಬೇಕಾಗುತ್ತದೆ. ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ. ರಾಜ್ಯದ 30 ಜಿಲ್ಲೆಗಳಲ್ಲಿ ಜಿಲ್ಲೆಗೆ ಒಂದರಂತೆ ಹಾಗೂ ಪ್ರತಿ ಕಂದಾಯ ಉಪ ವಿಭಾಗದಲ್ಲಿ 01 ವೃದ್ಧಾಶ್ರಮವನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಪ್ರಾರಂಭಿಸಲು ಅವಕಾಶವಿರುತ್ತದೆ. ಪ್ರಸ್ತುತ 26 ಜಿಲ್ಲೆಗಳಲ್ಲಿ ಹಾಗೂ 09 ಕಂದಾಯ ಉಪ ವಿಭಾಗಗಳಲ್ಲಿ ಸೇರಿದಂತೆ ಒಟ್ಟು 35 ವೃದ್ಧಾಶ್ರಮಗಳು ನಡೆಯುತ್ತಿವೆ.

### 4. <u>ಹಿರಿಯ ನಾಗರಿಕರಿಗೆ ಗುರುತಿನ ಚೀಟಿಗಳು:</u>

60 ವರ್ಷ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರ ಗುರುತಿನ ಚೀಟಿ ಪಡೆಯಲು ಸೇವಾ ಸಿಂಧು ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ದಿ:01.10.2018ರಿಂದ ಹಿರಿಯ ನಾಗರಿಕರು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಹಿರಿಯ ನಾಗರಿಕರ ಗುರುತಿನ ಚೀಟಿಯನ್ನು ಪಡೆಯಬಹುದಾಗಿದೆ.